**1ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ನಂಜನಗೂಡು.**

**ಸಿಸಿ ಸಂಖ್ಯೆ 900/2026**

ಪಿರ್ಯಾದುದಾರರು : ಬಿಳಿಗೆರೆ ಪೊಲೀಸ್ ಠಾಣೆ, ನಂಜನಗೂಡು

ವಿರುದ್ದ

ಆರೋಪಿಗಳು:

| |
|---|
| ಚೆನ್ನಸ್ವಾಮಿ ಕೆ ಬಿ, ಬಿನ್ ಲೇಟ್ ಬಸಪ್ಪ, 60 ವರ್ಷ<br>ವಾಸಃಕಲ್ಮಳ್ಳಿ ಗ್ರಾಮ, ನಂಜನಗೂಡು ತಾಲ್ಲೂಕು |

*** *** ***

ಆಪಾದನೆ

ಶ್ರೀಮತಿ.ಸರಿತ ಕುಮಾರಿ.ಎ.ಎಂ, ಬಿ.ಎ.,ಎಲ್.ಎಲ್.ಬಿ., 1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನಂಜನಗೂಡು ಆದ ನಾನು ಆರೋಪಿತರಾದ ನಿಮ್ಮ ಮೇಲೆ ಆಪಾದಿಸುವುದೇನೆಂದರೆ:-

ದಿನಾಂಕ 29.12.2025 ರಂದು ಬೆಳಗ್ಗೆ 09:30 ಗಂಟೆಯಲ್ಲಿ ನಂಜನಗೂಡು ತಾಲ್ಲೂಕು ಬಿಳಿಗೆರೆ ಪೊಲೀಸ್ ಠಾಣಾ ವ್ಯಾಪ್ತಿಗೆ ಸೇರಿದ ಕಲ್ಮಳ್ಳಿ ಗ್ರಾಮದ ಗೇಟ್-ಮತ್ತು ಕಲ್ಮಳ್ಳಿ ಗ್ರಾಮದ ನಡುವಿನ ರಸ್ತೆಯಲ್ಲಿ ಚಾಸಾ.1 ರವರು ತಮ್ಮ ಬಾಬ್ತು ಬೈಕ್ ನಂಬರ್ KA-09 R-3827 ಹಿರೋ ಹೋಂಡಾ ಸ್ಪ್ಲೆಂಡರ್ ಬೈಕಿನಲ್ಲಿ ಹಿಂಬದಿಯಲ್ಲಿ ಚಾಸಾ.2 ಮತ್ತು 3 ರವರನ್ನು ಕೂರಿಸಿಕೊಂಡು ಸುತ್ತೂರು ಜೆ ಎಸ್ ಎಸ್ ಶಾಲೆಗೆ ಚಾಸಾ.2 ಮತ್ತು 3 ರವರನ್ನು ಬಿಟ್ಟು ಬರಲು ತಿ ನರಸೀಪುರ-ನಂಜನಗೂಡು ಮುಖ್ಯ ರಸ್ತೆ ಕಡೆಗೆ ನಾಲ್ಕನೇ ತಿರುವು ದೊಡ್ಡನೆಲ್ಲಿ ಹತ್ತಿರ ಮಾದಪ್ಪರವರ ಜಮೀನಿನ ಬಳಿ ರಸ್ತೆಯ ಎಡಭಾಗದಲ್ಲಿ ಹೋಗುತ್ತಿದ್ದಾಗ ಆರೋಪಿತರಾದ ನೀವು KA-05-MP-5058 ರೆನಾಲ್ಟ್ ಸ್ಕಾಲಾ ಕಾರನ್ನು

ಎದುರುಗಡೆಯಿಂದ ಅಂದರೆ ತಿ ನರಸೀಪುರ-ನಂಜನಗೂಡು ಮುಖ್ಯ ರಸ್ತೆಯ ಕಡೆಯಿಂದ ಅತಿವೇಗವಾಗಿ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಬಂದು ಚಾಸಾ.1 ರವರು ಚಾಲನೆ ಮಾಡುತ್ತಿದ್ದ ಬೈಕಿಗೆ ಮುಖಾಮುಖಿಯಾಗಿ ಡಿಕ್ಕಿ ಮಾಡಿ ಅಪಘಾತಪಡಿಸಿರುತ್ತೀರಿ. ಆದ್ದರಿಂದ ಆರೋಪಿಯಾದ ನೀವು ಭಾರತೀಯ ನ್ಯಾಯ ಸಂಹಿತೆಯ ಕಲಂ.281 ರಡಿಯಲ್ಲಿ ದಂಡಿಸಲ್ಪಡುವ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯತೆಯಲ್ಲಿ ಎಸಗಿರುತ್ತೀರೆಂದು ನಿಮ್ಮ ಮೇಲೆ ಆಪಾದಿಸಲಾಗಿದೆ.

ಕೊನೆಯದಾಗಿ, ಅದೇ ದಿನ, ಸಮಯ ಹಾಗೂ ಸ್ಥಳದಲ್ಲಿ ಆರೋಪಿತರಾದ ನೀವು ಮಾಡಿದ ಸದರಿ ಅಪಘಾತದಿಂದ ಚಾಸಾ. 1 ರಿಂದ 3 ರವರು ಬೈಕ್ ಸಮೇತ ಕೆಳಕ್ಕೆ ಬಿದ್ದು ಚಾಸಾ.1 ರವರಿಗೆ ಬಲಕಾಲಿನ ಬೆರಳು ಮತ್ತು ಬಲಕಾಲಿನ ಪಾದ ಎಢಭಾಗದ ಭುಜಕ್ಕೆ ಪೆಟ್ಟು ಬಿದ್ದು ತೀವ್ರ ಸ್ವರೂಪದ ಗಾಯವನ್ನುಂಟು ಮಾಡಿರುತ್ತೀರಿ . ಆದ್ದರಿಂದ ಆರೋಪಿಯಾದ ನೀವು ಭಾರತೀಯ ನ್ಯಾಯ ಸಂಹಿತೆಯ ಕಲಂ.125(ಬಿ) ರಡಿಯಲ್ಲಿ ದಂಡಿಸಲ್ಪಡುವ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯತೆಯಲ್ಲಿ ಎಸಗಿರುತ್ತೀರೆಂದು ನಿಮ್ಮ ಮೇಲೆ ಆಪಾದಿಸಲಾಗಿದೆ.

1. **ಈಗ ನಿಮಗೆ ಓದಿ ಹೇಳಿದ ನಿಮ್ಮ ಮೇಲಿನ ಆರೋಪ ನಿಮಗೆ ತಿಳಿಯಿತೇ?**
   **ಉಃ**

2. **ನಿಮ್ಮ ಮೇಲಿರುವ ಆರೋಪವನ್ನು ಒಪ್ಪಿಕೊಳ್ಳುವಿರಾ? ಅಥವಾ ನಿಮ್ಮ ಪರವಾಗಿ ವಿಚಾರಣೆ ನಡೆಸಲು ಬಯಸುವಿರಾ?**
   **ಉಃ**

(ಮೇಲ್ಕಂಡ ಆರೋಪವನ್ನು ಆರೋಪಿಗೆ ಓದಿ ಹೇಳಿ ಕೇಳಲಾಯಿತು. ಆರೋಪಿ ಕೊಟ್ಟ ಉತ್ತರವನ್ನು ಅವರು ಉತ್ತರಿಸಿದಂತೆಯೇ ಬರೆದುಕೊಂಡಿದ್ದು ಸಂಪೂರ್ಣ ಹಾಗೂ ಸರಿಯಾದ ಮಾಹಿತಿಯನ್ನು ಒಳಗೊಂಡಿದೆ ಎಂದು ದಿನಾಂಕ 13.03.2026 ರಂದು ತೆಗೆದ ನ್ಯಾಯಾಲಯದಲ್ಲಿ ದೃಢೀಕರಿಸಿರುತ್ತೇನೆ.)

**1ನೇ ಹೆಚ್ಚುವರಿ** ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ.,<br>ನಂಜನಗೂಡು.